**National**
**Kannada**
**30.05.2025 / 1.10 pm**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ನರ್ಸಿಂಗ್ ವೃತ್ತಿಪರರಿಗೆ ೨೦೨೫ರ ರಾಷ್ಟ್ರೀಯ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ ಪ್ರದಾನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಭಾರತದ ಭಯೋತ್ಪಾದನಾ ವಿರೋಧಿ ನೀತಿ, ಹೋರಾಟ ಅಚಲ ಮತ್ತು ನಿರಂತರ - ಪ್ರಧಾನಿ ನರೇಂದ್ರ ಮೋದಿ

೩. ಮೂರು ರಕ್ಷಣಾ ಸಾರ್ವಜನಿಕ ವಲಯದ ಉದ್ಯಮಗಳಿಗೆ ಮಿನಿರತ್ನ ಸ್ಥಾನಮಾನ

೪. ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾನ್ ಸಿಂಗಪುರ ಪ್ರವಾಸ; ೨೨ನೇ ಶಾಂಗ್ರಿ-ಲಾ ಸಂವಾದದಲ್ಲಿ ಭಾಗಿ

೫. ಐಪಿಎಲ್ ಟಿ-೨೦ ಕ್ರಿಕೆಟ್ : ಎಲಿಮಿನೇಟರ್ ಪಂದ್ಯದಲ್ಲಿಂದು ಗುಜರಾತ್ ಟೈಟನ್ಸ್ - ಮುಂಬೈ ಇಂಡಿಯನ್ಸ್ ಮುಖಾಮುಖಿ

**<><*<><>*><>**

**ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ರಾಷ್ಟ್ರಪತಿ ಭವನದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ೧೫ ನರ್ಸಿಂಗ್ ವೃತ್ತಿಪರರಿಗೆ ೨೦೨೫ರ ರಾಷ್ಟ್ರೀಯ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ನರ್ಸಿಂಗ್ ಕ್ಷೇತ್ರದಲ್ಲಿ ಅವರು ನೀಡಿರುವ ಅಪೂರ್ವ ಸೇವೆ ಮತ್ತು ಕೊಡುಗೆಗೆ ಈ ಪ್ರಶಸ್ತಿಯನ್ನು ನೀಡಲಾಗಿದೆ. ಈ ಸಂದರ್ಭದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ, ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವರಾದ ಅನುಪ್ರಿಯಾ ಪಟೇಲ್ ಮತ್ತು ಕೇಂದ್ರ ಸಚಿವ ಪ್ರತಾಪ್‌ರಾವ್ ಜಾಧವ್ ಉಪಸ್ಥಿತರಿದ್ದರು. ನರ್ಸಿಂಗ್ ವೃತ್ತಿಪರರು ಸಮಾಜಕ್ಕೆ ನೀಡುವ ಅಮೂಲ್ಯ ಸೇವೆಗಳನ್ನು ಗುರುತಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಈ ಪ್ರಶಸ್ತಿಯನ್ನು ೧೯೭೩ನೇ ವರ್ಷದಲ್ಲಿ ಸ್ಥಾಪಿಸಿತು.**

**ನರ್ಸಿಂಗ್ ಸೇವೆಗಳಲ್ಲಿ ಉತ್ಕೃಷ್ಟತೆ ತೋರಿದ ವೃತ್ತಿಪರರನ್ನು ಗೌರವಿಸುವ ಮೂಲಕ ಈ ಪ್ರಶಸ್ತಿ ನರ್ಸಿಂಗ್ ವಲಯಕ್ಕೆ ಪ್ರೋತ್ಸಾಹ ನೀಡಲು ಉದ್ದೇಶಿತವಾಗಿದೆ.**

<><*<><>*><>

ಭಾರತದ ಭಯೋತ್ಪಾದನಾ ವಿರೋಧಿ ನೀತಿ ಮತ್ತು ಹೋರಾಟ ಅಚಲ ಮತ್ತು ನಿರಂತರವಾಗಿರಲಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸ್ಪಷ್ಟಪಡಿಸಿದ್ದಾರೆ. ದೇಶದೊಳಗಿಂದಲೇ ಇರಲಿ ಅಥವಾ ಹೊರಗಿನಿಂದಲೇ ಇರಲಿ, ಭಯೋತ್ಪಾದನೆಯನ್ನು ನಾಶಪಡಿಸಲು ತಮ್ಮ ಸಂಕಲ್ಪ ಸಂಪೂರ್ಣವಾಗಿ ದೃಢವಾಗಿದೆ ಎಂದು ಅವರು ಹೇಳಿದ್ದಾರೆ.

ಬಿಹಾರದ ಕರಕಟ್‌ನಲ್ಲಿಂದು ೪೮ ಸಾವಿರದ ೫೨೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಿದರು ಮತ್ತು ಕೆಲವು ಯೋಜನೆಗಳಿಗೆ ಶಿಲಾನ್ಯಾಸ ನೆರವೇರಿಸಿದರು.

ಬಳಿಕ ನಡೆದ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, 'ಆಪರೇಷನ್ ಸಿಂಧೂರ" ವೇಳೆ ದೇಶದ ಪುತ್ರಿಯರ ಸಿಂಧೂರಿನ ಶಕ್ತಿ ಮತ್ತು ಬಿಎಸ್‌ಎಫ್ ಯೋಧರ ಅದ್ವಿತೀಯ ಶೌರ್ಯ, ಧೈರ್ಯಕ್ಕೆ ಪಾಕಿಸ್ತಾನ ಮತ್ತು ಜಗತ್ತು ಸಾಕ್ಷಿಯಾಗಿದೆ ಎಂದು ಹೇಳಿದರು. ಭಯೋತ್ಪಾದನೆ ಅಥವಾ ನಕ್ಸಲವಾದ ಎರಡರ ವಿರುದ್ಧ ತ್ವರಿತ ಮತ್ತು ನಿಖರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬಿಹಾರದ ಸಮಗ್ರ ಅಭಿವೃದ್ಧಿಗಾಗಿ ನಿರಂತರವಾಗಿ ಪ್ರಯತ್ನಿಸುತ್ತಿದೆ. ಶಾಂತಿ, ಸುರಕ್ಷಾ, ಶಿಕ್ಷಾ ಮತ್ತು ವಿಕಾಸ ಬಿಹಾರದ ಹಳ್ಳಿಹಳ್ಳಿಗಳವರೆಗೆ ತಪ್ಪದೇ ತಲುಪಲಿದೆ. ಶಾಂತಿ ಮತ್ತು ಸುರಕ್ಷತೆ ಇದ್ದಲ್ಲಿ ಅಭಿವೃದ್ಧಿಯ ಹೊಸ ಮಾರ್ಗಗಳು ತೆರೆಯಲ್ಪಡುತ್ತವೆ ಎಂದು ಪ್ರಧಾನಿ ಪ್ರತಿಪಾದಿಸಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಸುಮಾರು ೫ ಸಾವಿರದ ೫೦೦ ಕೋಟಿ ಮೌಲ್ಯದ ಚತುಷ್ಪಥ ಪಟ್ನಾ-ಗಯಾ-ದೊಭಿ ಹೆದ್ದಾರಿಯ ಮತ್ತು ೨೪೯ ಕೋಟಿ ಮೌಲ್ಯದ ಗೋಪಾಲ್ಗಂಜ್ ನಗರದ ರಾಷ್ಟ್ರೀಯ ಹೆದ್ದಾರಿ-೨೭ರಲ್ಲಿ ನಿರ್ಮಿತ ಹೆದ್ದಾರಿಯ ಭಾಗವನ್ನು ಉದ್ಘಾಟಿಸಿದರು.

ಅಲ್ಲದೆ, ಸುಮಾರು ೧ ಸಾವಿರದ ೩೩೦ ಕೋಟಿ ಮೌಲ್ಯದ ಸೋನ್ ನಗರ್ ಮತ್ತು ಮೊಹಮ್ಮದ್ ಗಂಜ್ ನಡುವೆ ನಿರ್ಮಿಸಲಾಗಿರುವ ಮೂರನೇ ರೈಲು ಮಾರ್ಗವನ್ನು ಪ್ರಧಾನಿ ಮೋದಿ ಅವರು ರಾಷ್ಟ್ರಕ್ಕೆ ಸಮರ್ಪಿಸಿದರು.

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಗೋವಾ ಜನತೆಗೆ ರಾಜ್ಯೋತ್ಸವದ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅವರು ಗೋವಾದ ಶ್ರೀಮಂತ ಸಾಂಸ್ಕೃತಿಕ ಪರಂಪರೆ, ರಮಣೀಯ ಕಡಲತೀರಗಳು, ಆತ್ಮೀಯ ಆತಿಥ್ಯ ಮತ್ತು ಪ್ರಪಂಚದಾದ್ಯಂತದ ಪ್ರವಾಸಿಗರನ್ನು ಆಕರ್ಷಿಸುತ್ತಿರುವ ಹಲವಾರು ಇತರ ಆಕರ್ಷಣೆಗಳನ್ನು ಎತ್ತಿ ತೋರಿಸಿದರು. ಸುಸ್ಥಿರ ಪ್ರವಾಸೋದ್ಯಮ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಮತ್ತು ಸ್ಥಳೀಯ ಸಮುದಾಯಗಳನ್ನು ಬೆಂಬಲಿಸುವ ಮೂಲಕ ಗೋವಾದ ಸಂಸ್ಕೃತಿ ಮತ್ತು ಪರಂಪರೆಯನ್ನು ಸಂರಕ್ಷಿಸುವಲ್ಲಿ ಪ್ರವಾಸಿಗರು ಮತ್ತು ನಿವಾಸಿಗಳು ಒಟ್ಟಾಗಿ ಕೆಲಸ ಮಾಡಬೇಕೆಂದು ಅವರು ಒತ್ತಾಯಿಸಿದರು. ಗೋವಾ ಅಭಿವೃದ್ಧಿಯ ಪಥದಲ್ಲಿ ಸಾಗುತ್ತಾ, ವಿಕಸಿತ ಭಾರತವನ್ನು ನಿರ್ಮಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ರಾಷ್ಟ್ರಪತಿಗಳು ಆಶಿಸಿದರು.

<><*<><>*><>

ಮುನಿಷನ್ಸ್ ಇಂಡಿಯಾ ಲಿಮಿಟೆಡ್ ಎಂಐಎಲ್, ಸಶಸ್ತ್ರ ವಾಹನ ನಿಗಮ ಎವಿಎನ್‌ಎಲ್ ಮತ್ತು ಇಂಡಿಯಾ ಆಪ್ಟೆಲ್ ಲಿಮಿಟೆಡ್ - ಐಒಎಲ್ ಎಂಬ ಮೂರು ರಕ್ಷಣಾ ಸಾರ್ವಜನಿಕ ವಲಯದ ಉದ್ಯಮಗಳಿಗೆ ಮಿನಿರತ್ನ ವರ್ಗ-೧ ಸ್ಥಾನಮಾನವನ್ನು ರಕ್ಷಣಾ ಸಚಿವಾಲಯ ಅನುಮೋದಿಸಿದೆ. ಮೂರು ವರ್ಷಗಳ ಅಲ್ಪಾವಧಿಯಲ್ಲಿಯೇ ಸರ್ಕಾರಿ ಸಂಸ್ಥೆಗಳಿಂದ ಲಾಭದಾಯಕ ಕಾರ್ಪೊರೇಟ್ ಸಂಸ್ಥೆಗಳಾಗಿ ರೂಪಾಂತರಗೊಂಡಿದ್ದಕ್ಕಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಎಲ್ಲಾ ಮೂರು ರಕ್ಷಣಾ ಸಾರ್ವಜನಿಕ ವಲಯದ ಉದ್ಯಮಗಳನ್ನು ಅಭಿನಂದಿಸಿದರು. ಕಂಪನಿಯ ವಹಿವಾಟು ಹೆಚ್ಚಿಸಲು, ಸ್ವದೇಶೀಕರಣವನ್ನು ಉತ್ತೇಜಿಸಲು ಮತ್ತು ಮಿನಿರತ್ನ ಸ್ಥಾನಮಾನವನ್ನು ನೀಡಲು ಅಗತ್ಯವಿರುವ ಇತರ ಕಾರ್ಯಕ್ಷಮತೆಯ ನಿಯತಾಂಕಗಳನ್ನು ಪೂರೈಸಲು ಎಂಐಎಲ್, ಎವಿಎನ್‌ಎಲ್ ಮತ್ತು ಐಒಎಲ್ ನ ಆಡಳಿತ ಮಂಡಳಿಯು ತೆಗೆದುಕೊಂಡ ಉಪಕ್ರಮಗಳ ಬಗ್ಗೆ ಅವರು ತೃಪ್ತಿ ವ್ಯಕ್ತಪಡಿಸಿದರು. ಈ ಉದ್ಯಮಗಳಿಗೆ ಮಿನಿರತ್ನ ಸ್ಥಾನಮಾನದ ಅನುಮೋದನೆಯು ಈ ಕಂಪನಿಗಳು ಬೆಳವಣಿಗೆಯ ಪಥದಲ್ಲಿ ಮುಂದುವರೆಯಲು ಹಾಗೂ ರಕ್ಷಣಾ ಉತ್ಪಾದನೆ ಮತ್ತು ರಫ್ತುಗಳಲ್ಲಿ ಹೊಸ ಎತ್ತರವನ್ನು ತಲುಪಲು ಮತ್ತಷ್ಟು ಸಬಲೀಕರಣಗೊಳಿಸುತ್ತದೆ ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

<><*<><>*><>

ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಇಂದಿನಿಂದ ೩ ದಿನಗಳ ಕಾಲ ಸಿಂಗಪುರ ಪ್ರವಾಸ ಕೈಗೊಳ್ಳಲಿದ್ದು, ಅಂತಾರಾಷ್ಟ್ರೀಯ ತಂತ್ರಜ್ಞಾನ ಅಧ್ಯಯನ ಸಂಸ್ಥೆ ಆಯೋಜಿಸಿರುವ ೨೨ನೇ ಶಾಂಗ್ರೀ-ಲಾ ಸಂವಾದದಲ್ಲಿ ಭಾಗವಹಿಸಲಿದ್ದಾರೆ.

ಈ ಭೇಟಿ ಸಂದರ್ಭದಲ್ಲಿ ಜನರಲ್ ಚೌಹಾನ್ ಆಸ್ಟ್ರೇಲಿಯಾ, ಐರೋಪ್ಯ ಒಕ್ಕೂಟ, ಫ್ರಾನ್ಸ್, ಜರ್ಮನಿ, ಇಂಡೋನೇಶಿಯಾ, ಜಪಾನ್, ನೆದರ್ಲೆಂಡ್ಸ್, ನ್ಯೂಜಿಲೆಂಡ್, ಫಿಲಿಪೈನ್ಸ್, ಸಿಂಗಪುರ, ಬ್ರಿಟನ್ ಮತ್ತು ಅಮೆರಿಕಾ ಸೇರಿದಂತೆ ಹಲವು ರಾಷ್ಟ್ರಗಳ ರಕ್ಷಣಾ ಮುಖ್ಯಸ್ಥರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ.

<><*<><>*><>

೨೦೨೫-೨೬ರ ಆರ್ಥಿಕ ವರ್ಷದಲ್ಲಿ ಭಾರತದ ಆರ್ಥಿಕತೆ ಅತೀ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯ ಸ್ಥಾನವನ್ನು ಉಳಿಸಿಕೊಳ್ಳಲಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ಆರ್‌ಬಿಐ ವರದಿ ತಿಳಿಸಿದೆ.

ಖಾಸಗಿ ಬಳಕೆಯಲ್ಲಿನ ಏರಿಕೆ, ಹಣಕಾಸು ಪರಿಸ್ಥಿತಿ ಸರಾಗಗೊಳಿಸಿರುವುದು ಮತ್ತು ಕೇಂದ್ರ ಸರ್ಕಾರ ಬಂಡವಾಳ ವೆಚ್ಚಕ್ಕೆ ಒತ್ತು ನೀಡುತ್ತಿರುವುದರಿಂದ ಭಾರತೀಯ ಆರ್ಥಿಕತೆ ತನ್ನ ಬೆಳವಣಿಗೆಯನ್ನು ಕಾಯ್ದುಕೊಳ್ಳಲು ಸಹಾಯವಾಗಲಿದೆ ಎಂದು ವರದಿ ತಿಳಿಸಿದೆ.

<><*<><>*><>

ಪಂಜಾಬ್‌ನ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಎಲಿಮಿನೇಟರ್ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

<><*<><>*><>

ಪ್ರತಿಷ್ಠಿತ ರಾಷ್ಟ್ರೀಯ ರಕ್ಷಣಾ ಅಕಾಡೆಮಿ ಎನ್‌ಡಿಎ ಇಂದು ಪುಣೆಯಲ್ಲಿ ಆಯೋಜಿಸಿದ್ದ ತನ್ನ ೧೪೮ ನೇ ಕೋರ್ಸ್‌ನ ಪಾಸಿಂಗ್ ಔಟ್ ಪೆರೇಡ್‌ನಲ್ಲಿ ಮೊದಲ ಬಾರಿಗೆ ಮಹಿಳಾ ಕೆಡೆಟ್‌ಗಳಿಗೆ ಪದವಿ ಪ್ರದಾನ ಮಾಡಲಾಗಿದೆ. ಒಟ್ಟು ೧೭ ಮಹಿಳಾ ಕೆಡೆಟ್‌ಗಳು ತಮ್ಮ ಪುರುಷ ಸಹವರ್ತಿಗಳೊಂದಿಗೆ ಹೆಮ್ಮೆಯಿಂದ ಮೆರವಣಿಗೆ ನಡೆಸಿದರು, ಇದು ರಾಷ್ಟ್ರದ ಮಿಲಿಟರಿ ನಾಯಕತ್ವವನ್ನು ರೂಪಿಸುವ ಎನ್‌ಡಿಎಯ ಪರಂಪರೆಯಲ್ಲಿ ಹೊಸ ಅಧ್ಯಾಯವನ್ನು ಗುರುತಿಸಿದೆ. ಈ ಕಾರ್ಯಕ್ರಮದಲ್ಲಿ

ಮಿಜೋರಾಂ ರಾಜ್ಯಪಾಲ ಮತ್ತು ಮಾಜಿ ಸೇನಾ ಮುಖ್ಯಸ್ಥ ಜನರಲ್ ವಿಜಯ್ ಕುಮಾರ್ ಸಿಂಗ್ ಉಪಸ್ಥಿತರಿದ್ದರು. ಅವರಿಗೆ ಗೌರವ ರಕ್ಷೆ  ನೀಡಲಾಯಿತು. ಮೆರವಣಿಗೆಯಲ್ಲಿ ಐತಿಹಾಸಿಕ ಮೈಲಿಗಲ್ಲನ್ನು ಶ್ಲಾಘಿಸಿದ ಜನರಲ್ ವಿಜಯ್ ಕುಮಾರ್ ಸಿಂಗ್, ಇದು ಹೆಚ್ಚಿನ ಒಳಗೊಳ್ಳುವಿಕೆ ಮತ್ತು ಸಬಲೀಕರಣದತ್ತ ಸಾಮೂಹಿಕ ಪ್ರಯಣದಲ್ಲಿ ಒಂದು ಐತಿಹಾಸಿಕ ಮೈಲಿಗಲ್ಲಾಗಿದೆ ಈ ಯುವತಿಯರು 'ನಾರಿ ಶಕ್ತಿ'ಯ ಶಾಶ್ವತ ಸಂಕೇತವಾಗಿದ್ದು, ಮಹಿಳಾ ನೇತೃತ್ವದ ಅಭಿವೃದ್ಧಿಯನ್ನು ಸಾಕಾರಗೊಳಿಸುತ್ತಾರೆ ಎಂದರು.

<><*<><>*><>

ದಕ್ಷಿಣ ಕೋರಿಯಾದ ಗುಮಿಯಲ್ಲಿ ನಡೆಯುತ್ತಿರುವ ಏಷಿಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ನಿನ್ನೆ ಭಾರತದ ಅಥ್ಲೀಟ್‌ಗಳು ಗಮನಾರ್ಹ ಸಾಧನೆ ತೋರಿದ್ದು, ೩ ಚಿನ್ನ, ೨ ಬೆಳ್ಳಿ ಮತ್ತು ೧ ಕಂಚಿನ ಪದಕಗಳನ್ನು ಗೆದ್ದಿದ್ದಾರೆ. ಮಹಿಳಾ ೧೦೦ ಮೀಟರ್ ಹರ್ಡಲ್ಸ್ ಸ್ಪರ್ಧೆಯಲ್ಲಿ ಜ್ಯೋತಿ ಯರಾಜಿ, ಪುರುಷರ ೩೦೦೦ ಮೀಟರ್ ಸ್ಟೀಪಲ್‌ಚೇಸ್‌ನಲ್ಲಿ ಅವಿನಾಶ್ ಸಾಬ್ಲೆ, ಚಿನ್ನದ ಪದಕ ಗೆದ್ದಿದ್ದು, ೪*೪೦೦ ಮೀಟರ್ ರಿಲೇ ಪಂದ್ಯದಲ್ಲಿ ಭಾರತದ ಮಹಿಳಾ ತಂಡ ಸ್ವರ್ಣ ಪದಕಕ್ಕೆ ಕೊರಳೊಡ್ಡಿದೆ.

<><*<><>*><>

ಸಿಂಗಾಪೂರ್ ಓಪನ್ ಬ್ಯಾಟ್‌ಮಿಟನ್ ಟೂರ್ನಿಯ ಪುರುಷರ ಡಬಲ್ಸ್ ವಿಭಾಗದ ಕ್ವಾರ್ಟರ್ ಫೈನಲ್ಸ್ ಪಂದ್ಯದಲ್ಲಿಂದು ಭಾರತದ ಸಾತ್ವಿಕ್ಸಾಯಿರಾಜ್ ರಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಮಲೇಷ್ಯಾದ ಗೋ ಸೇ ಫೇ ಮತ್ತು ನೂರ್ ಇಜುಡಿನ್ ಜೋಡಿಯನ್ನು  ಎದುರಿಸಲಿದ್ದಾರೆ. ಏಳನೇ ಶ್ರೇಯಾಂಕದ ಇಂಡೋನೇಷ್ಯದ ಸಬರ್ ಕಾರ್ಯಾಮನ್ ಗುಟಾಮಾ ಮತ್ತು ಮೊಹ್ ರೇಝಾ ಪಹ್ಲೆವಿ ಇಸ್ಫಹಾನಿ ಜೋಡಿಯನ್ನು ೧೯-೨೧, ೨೧-೧೬, ೨೧-೧೯ ಅಂಕಗಳಲ್ಲಿ ಮಣಿಸಿ ಭಾರತದ ಜೋಡಿ ಕ್ವಾರ್ಟರ್‌ಫೈನಲ್ ಪ್ರವೇಶಿಸಿದೆ. ನಿನ್ನೆ, ಪುರುಷರ ಸಿಂಗಲ್ಸ್‌ನಲ್ಲಿ ಎಚ್. ಎಸ್. ಪ್ರಣೋಯ್ ಮತ್ತು ಮಹಿಳಾ ಸಿಂಗಲ್ಸ್‌ನಲ್ಲಿ ಪಿ.ವಿ. ಸಿಂಧು, ಪ್ರೀಕ್ವಾರ್ಟರ್‌ಫೈನಲ್ ಹಂತದಲ್ಲೇ ಸೋಲು ಕಂಡು ಟೂರ್ನಿಯಿಂದ ಹೊರಬಿದ್ದಿದ್ದಾರೆ.

<><*<><>*><>

ಕೇಂದ್ರ ಕೃಷಿ ಸಂಶೋಧನಾ ಸಂಸ್ಥೆಗಳು ಮತ್ತು ರಾಜ್ಯ ಕೃಷಿ ವಿಶ್ವವಿದ್ಯಾಲಯಗಳು ನಿನ್ನೆ ತೆಲಂಗಾಣದ ಕರೀಂನಗರ ಜಿಲ್ಲೆಯ ಜಮ್ಮಿಕುಂಟದಲ್ಲಿ - ವಿಕಾಸಿ ಕೃಷಿ ಸಂಕಲ್ಪ ಅಭಿಯಾನವನ್ನು ಪ್ರಾರಂಭಿಸಿದವು. ಈ ಅಭಿಯಾನವು ರೈತರಿಗೆ ಜ್ಞಾನವನ್ನು ನೀಡುವ ಮೂಲಕ ಕೃಷಿ ಸಂಶೋಧನೆ ಮತ್ತು ಕೃಷಿ ಸಮುದಾಯದ ನಡುವಿನ ಅಂತರವನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿದೆ. ಈ

ನಡುವೆ ಲಡಾಖ್‌ನ ಲೇಹ್ ಜಿಲ್ಲೆಯ ಕೃಷಿ ವಿಜ್ಞಾನ ಕೇಂದ್ರದ ಅಧಿಕಾರಿಗಳು ವಿವಿಧ ಗ್ರಾಮಗಳಲ್ಲೂ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ನಡೆಸಲು ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಮತ್ತು ಲೈನ್ ಇಲಾಖೆಗಳ ಅಧಿಕಾರಿಗಳ ನಾಲ್ಕು ತಂಡಗಳನ್ನು ರಚಿಸಿದ್ದಾರೆ.

<><*<><>*><>